# ಬಾಗಲಕೋಟ ವಿಶ್ವವಿದ್ಯಾಲಯ

(ಕರ್ನಾಟಕ ಸರ್ಕಾರದ ರಾಜ್ಯ ಸಾರ್ವಜನಿಕ ವಿಶ್ವವಿದ್ಯಾಲಯ)
**ಮುಧೋಳ ರಸ್ತೆ, ಜಮಖಂಡಿ-587301 ಬಾಗಲಕೋಟೆ ಜಿಲ್ಲೆ**

# Bagalkot University

(State Public University of Govt. of Karanataka)
Mudhol Road, Jamkhandi-587301 Dist: Bagalkote

**Mail ID** : bgkujkd@gmail.com
**Website: https:// bgku.ac.in**

**ಕುಲಸಚಿವರ ಕಾರ್ಯಾಲಯ**

**Tel No:** (08353)295123, 295124


BGKUJ/RO/2023-24/ Date:16-12-2023

## :ಅಭ್ಯರ್ಥಿಗಳಿಗೆ ಸಾಮಾನ್ಯ ಸೂಚನೆಗಳು:

1. ಈ ಹುದ್ದೆಗಳು ಸಂಪೂರ್ಣ ಪ್ರಮಾಣದಲ್ಲಿ ತಾತ್ಕಾಲಿಕವಾಗಿದ್ದು, ಅತಿಥಿ ಉಪನ್ಯಾಸಕರನ್ನು ವಿಶ್ವವಿದ್ಯಾಲಯದ ವಿವಿಧ ವಿಷಯಗಳ ಕಾರ್ಯಭಾರದ ಅಗತ್ಯತೆಗನುಗುಣವಾಗಿ ಹಾಗೂ ಸದ್ಯದಲ್ಲಿ ಜಾರಿಯಲ್ಲಿರುವ ನಿಯಮಾವಳಿ ಅನುಸಾರ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲಾಗುವುದು.
2. ಅಭ್ಯರ್ಥಿಗಳು ವಿದ್ಯಾರ್ಹತೆ ಹಾಗೂ ಜಾತಿ/ವರ್ಗ ಪ್ರಮಾಣ ಪತ್ರಗಳಿಗೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಅಧಿಕೃತ ದಾಖಲಾತಿಗಳ ಧೃಢೀಕರಣ ಪ್ರತಿಗಳನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಲಗತ್ತಿಸತಕ್ಕದ್ದು.
3. ನಿಗದಿತ ಅರ್ಜಿ ನಮೂನೆಯನ್ನು ವಿಶ್ವವಿದ್ಯಾನಿಲಯದ ಅಧಿಕೃತ ಜಾಲತಾಣ www.bgku.ac.in ನಿಂದ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿ ದ್ವಿ-ಪ್ರತಿ ಅರ್ಜಿ ಕೊನೆಯ ದಿನಾಂಕ:28-12-2023 ಒಳಗೆ ಸಲ್ಲಿಸುವುದು ಹಾಗೂ ಮೂಲ ದಾಖಲೆಗಳೊಂದಿಗೆ ಸಂದರ್ಶನಕ್ಕೆ ಕಡ್ಡಾಯವಾಗಿ ಹಾಜರಾಗಬೇಕು.
4. ಪ್ರತಿ ವಿಭಾಗಗಳಿಗೆ/ವಿಷಯಗಳಿಗೆ ಪ್ರತ್ಯೇಕ ಅರ್ಜಿಯನ್ನು ಭರ್ತಿಮಾಡಿ ಸಲ್ಲಿಸತಕ್ಕದ್ದು.
5. ಅತಿಥಿ ಉಪನ್ಯಾಸಕರಾಗಿ ಆಯ್ಕೆಯಾದ ಅಭ್ಯರ್ಥಿಗಳು ವಿಶ್ವವಿದ್ಯಾಲಯದ ವ್ಯಾಪ್ತಿಗೆ ಒಳಪಡುವ ಯಾವುದೇ ಸ್ಥಳದಲ್ಲಿ ಸೇವೆ ಸಲ್ಲಿಸಲು ಸಿದ್ದರಿರಬೇಕು.
6. ಅತಿಥಿ ಉಪನ್ಯಾಸಕರ ಹುದ್ದೆಯು ಶೈಕ್ಷಣಿಕ ವರ್ಷ ಅವಧಿಗೆ ಮಾತ್ರ ಸೀಮಿತವಾಗಿರುತ್ತದೆ ಅಥವಾ ವಿಶ್ವವಿದ್ಯಾಲಯದ ಮುಂದಿನ ಆದೇಶದವರೆಗೆ ಚಾಲ್ತಿಯಲ್ಲಿರುತ್ತದೆ.
7. ಅರ್ಜಿಯಲ್ಲಿ ನೀಡಿರುವ ವಿಳಾಸವು ಅಂತಿಮವಾಗಿದ್ದು, ನಂತರ ವಿಳಾಸ ಬದಲಾವಣೆ ಆದರೆ ಯಾವುದೇ ಪತ್ರ ವ್ಯವಹಾರಗಳಿಗೆ ಆಸ್ಪದವಿರುವದಿಲ್ಲ.
8. ನಿಗದಿಪಡಿಸಿದ ದಿನಾಂಕದ ನಂತರ ತಲುಪಿದ, ಅಪೂರ್ಣವಾಗಿರುವ ಮತ್ತು ನಿಗದಿತ ನಮೂನೆಯಲ್ಲಿರದ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಮತ್ತು ಈ ವಿಷಯದಲ್ಲಿ ಮುಂದಿನ ಪತ್ರ ವ್ಯವಹಾರಗಳಿಗೆ ಆಸ್ಪದವಿರುವುದಿಲ್ಲ.
9. ಆಯ್ಕೆಯಾದ ಅತಿಥಿ ಉಪನ್ಯಾಸಕರ ಸಂಭಾವನೆಯನ್ನು ವಿಶ್ವವಿದ್ಯಾಲಯದ ನಿಯಮಾನುಸಾರ ನೀಡಲಾಗುವುದು.
10. ವಿಷಯವಾರು ಮೌಖಿಕ ಸಂದರ್ಶನ (Walk-in Interview) ದಿನಾಂಕ ಮತ್ತು ಸಮಯ ಬದಲಾವಣೆಯಾದರೆ ವಿಶ್ವವಿದ್ಯಾಲಯದ ಜಾಲತಾಣದಲ್ಲಿ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ವಿಶ್ವವಿದ್ಯಾಲಯದ ವೆಬ್‌ಸೈಟ್ ಗಮನಿಸಲು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕುಲಸಚಿವರ ಕಾರ್ಯಾಲಯದ ಸಹಾಯವಾಣಿ ಸಂಖ್ಯೆ:08353295124, ಗೆ ಕರೆ ಮಾಡಿ ಕೂಡಾ ತಿಳಿಯಬಹುದು.

11. ಅತಿಥಿ ಉಪನ್ಯಾಸಕರ ಸಂದರ್ಶನಕ್ಕಾಗಿ ಬರುವ ಅಭ್ಯರ್ಥಿಗಳಿಗೆ ವಿಶ್ವವಿದ್ಯಾಲಯದಿಂದ ಯಾವುದೇ ತೆರನಾದ ಭತ್ಯೆಗಳನ್ನು ನೀಡಲಾಗುವದಿಲ್ಲ.

12. ಸಂದರ್ಶನಕ್ಕಾಗಿ ಬರುವ ಅಭ್ಯರ್ಥಿಗಳು ವಿದ್ಯಾರ್ಹತೆ ಹಾಗೂ ಜಾತಿ/ವರ್ಗ ಪ್ರಮಾಣ ಪತ್ರಗಳಿಗೆ ಸಂಬಂಧಪಟ್ಟ ಅಧಿಕೃತ ಮೂಲ ದಾಖಲೆಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕು ತಪ್ಪಿದ್ದಲ್ಲಿ ನಿಯಮಾನುಸಾರ ಮುಂದಿನ ಕ್ರಮ ಕೈಗೊಳ್ಳಲಾಗುವದು.

13. ತಾತ್ಕಾಲಿಕ ಅತಿಥಿ ಉಪನ್ಯಾಸಕರ ನೇಮಕಕ್ಕೆ ಸಂದರ್ಶನ ನಡೆಸುವುದು ವಿಶ್ವವಿದ್ಯಾಲಯದ ವಿವೇಚನೆಗೆ ಒಳಪಟ್ಟಿರುತ್ತದೆ.

14. ಈ ಅಧಿಸೂಚನೆಯಲ್ಲಿ ಪ್ರಕಟಿಸಿದ ಯಾವುದೇ ಹುದ್ದೆಗಳನ್ನು ತುಂಬುವ ಇಲ್ಲವೇ ತುಂಬದಿರುವ ಅಧಿಕಾರವು ವಿಶ್ವವಿದ್ಯಾಲಯಕ್ಕೆ ಸೇರಿದೆ.

15. ಸದರಿ ನೇಮಕಾತಿಗೆ ಸಂಬಂದಿಸಿದ ಎಲ್ಲಾ ಮಾಹಿತಿಗಳನ್ನು ಬಾಗಲಕೋಟ ವಿಶ್ವವಿದ್ಯಾಲಯದ ಅಧಿಕೃತ ಜಾಲತಾಣ (www.bgku.ac.in) ದಲ್ಲಿ ಕಾಲಕಾಲಕ್ಕೆ ಹೊರಡಿಸುವ ಅಧಿಸೂಚನೆ/ಸುತ್ತೋಲೆ/ಪತ್ರಗಳನ್ನು ಪ್ರಕಟಿಸಲಾಗುವುದು. ಆದ್ದರಿಂದ ಅಭ್ಯರ್ಥಿಗಳು ಸದರಿ ಜಾಲತಾಣವನ್ನು ಪ್ರತಿನಿತ್ಯ ಗಮನಿಸತಕ್ಕದ್ದು.

16. 2023–24 ನೇ ಶೈಕ್ಷಣಿಕ ಸಾಲಿನ ವಿಭಾಗವಾರು ವಿದ್ಯಾಥಿಗಳ ದಾಖಲಾತಿ ಅನುಗುಣವಾಗಿ ಸಂದರ್ಶನಕ್ಕೆ ನೇಮಕಾತಿಗಳ ಅಂಕಿ ಸಂಖ್ಯೆಗಳ/ಅಂದಾಜು ಹುದ್ದೆಗಳ ಬದಲಾವಣೆಯ ತಿದ್ದುಪಡಿಗಳೊಪಟ್ಟಿರುತ್ತೆ.

17. ಪ್ರತ್ಯಕ್ಷವಾಗಿ ಇಲ್ಲವೇ ಪರೋಕ್ಷವಾಗಿ ಪ್ರಭಾವ ಬೀರುವ ಅಭ್ಯರ್ಥಿಯ ಅಭ್ಯರ್ಥಿತನವನ್ನು ಅನರ್ಹಗೊಳಿಸಲಾಗುತ್ತದೆ.

18. ಅಭ್ಯರ್ಥೀಗಳು ಒಂದು ವೇಳೆ ವಿದ್ಯಾರ್ಹತೆ , ಸೇವಾ ವಿವರಗಳು ಹಾಗೂ ಇನ್ನಿತರ ಮಾಹಿತಗಳನ್ನು ತಪ್ಪಾಗಿ ನಮೂದಿಸಿದ್ದಲ್ಲಿ, ಮುಂದಿನ ಪರಿಣಾಮಗಳಿಗೆ ಅಭ್ಯರ್ಥಿಗಳೆ ನೇರ ಹೊಣೆಗಾರರಾಗಿರುತ್ತಾರೆ ಹಾಗೂ ಅಂತಹ ಅಭ್ಯರ್ಥಿಗಳನ್ನು ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯಿಂದ ಅನರ್ಹಗೊಳಿಸಿ ಅವರುಗಳ ವಿರುದ್ಧ ವಿಶ್ವವಿದ್ಯಾಲಯದಿಮದ ಕ್ರಮ ಜರುಗಿಸಲಾಗುವುದು.

19. ಅತಿಥಿ ಉಪನ್ಯಾಸಕರು ನೇಮಕರಾಗಿ ಪದೇ ಪದೇ ಗೈರು ಹಾಜರಗುವ ಮತ್ತು ಇತರೆ ವಿಷಯಕ್ಕನುಗುಣವಾಗಿ ರದ್ದು ಪಡಿಸುವ ಅಧಿಕಾರ ವಿಶ್ವವಿದ್ಯಾಲಯ ಹೊಂದಿರುತ್ತದೆ. ವಿಶ್ವವಿದ್ಯಾಲಯದ ನಿರ್ಣಯವು ಅಂತಿಮವಾಗಿರುತ್ತದೆ.

20. ಅತಿಥಿ ಉಪನ್ಯಾಸಕರಾಗಿ ನೇಮಕಾತಿಯಾಗಿ ತಮ್ಮ ವೈಯಕ್ತಿಕ ಕಾರಣ ನೀಡಿ ರಾಜಿನಾಮೆಯನ್ನು ನೀಡುವ ಹಾಗೂ ಪದೇ ಪದೇ ಕರ್ತವ್ಯಕ್ಕೆ ಗೈರು ಹಾಜರಗುವ ಅತಿಥಿ ಉಪನ್ಯಾಕರ ಸ್ಥಳಗಳಲ್ಲಿ ಬೇರೊಬ್ಬರು ಅತಿಥಿ ಉಪನ್ಯಾಕರನ್ನು ನೇಮಿಸಿಕೊಳ್ಳುವ ಅಧಿಕಾರವು ವಿಶ್ವವಿದ್ಯಾಲಯಕ್ಕೆ ಸೇರಿದೆ.

21. 2023–24 ನೇ ಶೈಕ್ಷಣಿಕ ಸಾಲಿನಲ್ಲಿ ಆಯ್ಕೆಗೊಂಡ/ಕರ್ತವ್ಯ ನಿರ್ವಹಿಸುವ ಅತಿಥಿ ಉಪನ್ಯಾಸಕರಿಗೆ ವಿಶ್ವವಿದ್ಯಾಲಯದ ಶೈಕ್ಷಣಿಕ ವೇಳಾಪಟ್ಟಿಯಂತೆ 2023–24 ನೇ ಸಾಲಿನ ಮುಕ್ತಾಯದವರೆಗೆ (ಬೋಧನಾ ಕಾರ್ಯಭಾರದ ಲಭ್ಯತೆಗನುಸಾರವಾಗಿ) ಅಥವಾ 10 ತಿಂಗಳಿಗೆ ಮಾತ್ರ ಇದರಲ್ಲಿ ಯಾವುದೂ ಮೊದಲು ಅಲ್ಲಿಯವರೆಗೆ ಮುಂದುವರೆಸಿ, ನಂತರ ಕರ್ತವ್ಯದಿಂದ ಬಿಡುಗಡೆಗೊಳಿಸುವ ಅಧಿಕಾರ ವಿಶ್ವವಿದ್ಯಾಲಯಕ್ಕೆ ಸೇರಿದೆ.

ಬಾಗಲಕೋಟ ವಿಶ್ವವಿದ್ಯಾಲಯ ಜಮಖಂಡಿ ಮುಖ್ಯ ಆವರಣದ ಸಿಂಡಿಕೇಟ್ ಹಾಲ್‌ನಲ್ಲಿ ವಿಭಾಗವಾರು ವಿವಿಧ ವಿಷಯಗಳಿಗೆ ಅನುಗುಣವಾಗಿ ವಿಶ್ವವಿದ್ಯಾಲಯದ ಅಧಿಕೃತ ಜಾಲತಾಣದಲ್ಲಿ ಸೂಚಿಸಿದ ದಿನ ಹಾಗೂ ಸಮಯಕ್ಕೆ ಅನುಗುಣವಾಗಿ ಮೌಖಿಕ ಸಂದರ್ಶನಕ್ಕೆ (Walk in Interview) ಭರ್ತಿ ಮಾಡಿದ ದ್ವಿ–ಪ್ರತಿ ಅರ್ಜಿ ಹಾಗೂ ಮೂಲ ದಾಖಲೆಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕು ತಪ್ಪಿದ್ದಲ್ಲಿ ವಿಶ್ವವಿದ್ಯಾಲಯದ ನಿಯಮಾನುಸಾರ ಮುಂದಿನ ಕ್ರಮ ಕೈಗೊಳ್ಳಲಾಗುವದು ಎಂದು ತಿಳಿಸಲಾಗಿದೆ.

**ವಿಶೇಷ ಸೂಚನೆ:** ಸಂದರ್ಶನದ ಸಮಯಕ್ಕಿಂತ ಒಂದು ಗಂಟೆ ಮುಂಚಿತವಾಗಿ ಅಭ್ಯರ್ಥಿಗಳು ಆಗಮಿಸಬೇಕು. ಅಭ್ಯರ್ಥಿಗಳ ದಾಖಲೆಗಳನ್ನು ಪರಿಶೀಲಿಸಲಾಗುವುದು.

**ಸಹಿ/–**

**ಕುಲಸಚಿವರು**